ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : ಪತ್ರ : 2016–17 : ಜೂನ್ 22, 2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಪತ್ರಿಕಾಗೋಷ್ಠಿ:<br>ಶ್ರೀ ಕಾಂತರಾಜು<br>ಅಧ್ಯಕ್ಷರು,<br>ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ಬೆಂಗಳೂರು | 23-06-2016<br>ಗುರುವಾರ<br>ಬೆಳಿಗ್ಗೆ<br>11–00 ಗಂಟೆಗೆ | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಕಚೇರಿ, ದೇವರಾಜು ಅರಸು ಭವನ, 2 ನೇ ಮಹಡಿ, ವಸಂತನಗರ, ಬೆಂಗಳೂರು. |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ಜೂನ್ 25 ಮತ್ತು 26 ರಂದು
# ಚಿಂತಾಮಣಿ ತಾಲ್ಲೂಕಿನ ಪೆದ್ದೂರಿನಲ್ಲಿ 'ಜನಪದ ಸಂಭ್ರಮ'

ಬೆಂಗಳೂರು, ಜೂನ್ 22 (ಕರ್ನಾಟಕ ವಾರ್ತೆ)

ಚಿಕ್ಕಬಳ್ಳಾಪುರ ಜಿಲ್ಲೆ ಚಿಂತಾಮಣಿ ತಾಲ್ಲೂಕಿನ ಪೆದ್ದೂರಿನಲ್ಲಿ ಜೂನ್ 25 ಹಾಗೂ 26 ರಂದು ಹಮ್ಮಿಕೊಳ್ಳಲಾಗಿರುವ 'ಜನಪದ ಸಂಭ್ರಮ' ದಲ್ಲಿ ಹೆಚ್ಚು ಕಲಾಸಕ್ತರು, ಸಾರ್ವಜನಿಕರು ಭಾಗವಹಿಸುವಂತೆ ಸರ್ವೋಚ್ಚ ನ್ಯಾಯಾಲಯದ ಗೌರವಾನ್ವಿತ ನ್ಯಾಯಮೂರ್ತಿಗಳಾದ ವಿ. ಗೋಪಾಲಗೌಡ ಕರೆ ನೀಡಿದ್ದಾರೆ.

ಅವರು ಇಂದು ವಾರ್ತಾ ಮತ್ತು ಸಾರ್ವಜನಿಕ ಇಲಾಖೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದರು. ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾಡಳಿತ ಚಿಕ್ಕಬಳ್ಳಾಪುರ ಮತ್ತು ಕೋಲಾರ, ದೂರದರ್ಶನ ಇವುಗಳ ಸಹಯೋಗದಿಂದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಜನಪದ ಕಲೆಗಳ ಸಿರಿಯನ್ನು ಜನತೆಗೆ ತೋರಿಸುವ ನಿಟ್ಟಿನಲ್ಲಿ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ನಲವತ್ತು ವರ್ಷಗಳಿಂದ ಕಂಡ ಕನಸು ಈಗ ನನಸಾಗಿದೆ. ಜನಪದ ಕಲಾ ಪ್ರಕಾರಗಳನ್ನು ಒಂದೇ ಸೂರಿನಡಿ ಜೂನ್ 25 ಹಾಗೂ 26 ಈ ಎರಡೂ ದಿನಗಳು ಚಿಂತಾಮಣಿಯ ಪೆದ್ದೂರಿನ ಸುಮಾರು 2 ಎಕರೆ ಪ್ರದೇಶದಲ್ಲಿ ಹಮ್ಮಿಕೊಳ್ಳಲಾಗಿದೆ. ರಾಜ್ಯದ ವಿವಿದೆಡೆಗಳಿಂದ ಕಲಾವಿದರು ಆಗಮಿಸಿ ತಮ್ಮ ಪ್ರದೇಶದ ಜಾನಪದ ಕಲಾ ಸೊಬಗನ್ನು ಇಲ್ಲಿ ಪ್ರದರ್ಶಿಸಲಿದ್ದಾರೆ. ಕಲಾವಿದರಿಗೆ ವಸತಿ, ಸಾರ್ವಜನಿಕರಿಗೆ ಜನಪದ ಊಟದ ವ್ಯವಸ್ಥೆಯನ್ನು ಸಹ ಕಲ್ಪಿಸಲಾಗಿದೆ. ಇದೇ ರೀತಿಯಲ್ಲಿ ಮುಂಬರುವ ದಿನಗಳಲ್ಲಿ ತುಮಕೂರು ಮುಂತಾದ ಜಿಲ್ಲೆಗಳಲ್ಲೂ ಸಹ ಇಂತಹ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು ಎಂದರು.

ನಂತರ ಮಾತನಾಡಿದ ಕರ್ನಾಟಕ ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿಗಳಾದ ನ್ಯಾಯಮೂರ್ತಿ ಹೆಚ್.ಎನ್. ನಾಗಮೋಹನದಾಸ್ ಮಾತನಾಡಿ, ಜನಪದ ಕಲೆಗಳಿಗೆ ನೂರಾರು ವರ್ಷಗಳ ಇತಿಹಾಸವಿದೆ. ಇವು ಪ್ರದರ್ಶನಗೊಂಡರೆ ಮಾತ್ರ ಇದರ ಸಿರಿತನ ಜನರಿಗೆ ಮುಟ್ಟುತ್ತದೆ. ಇಲ್ಲಿ ಅಭಿವ್ಯಕ್ತಿ ಬಹಳ ಮುಖ್ಯ. ಕೆಲವು ಕಲೆಗಳು ತಲೆಮಾರುಗಳಿಂದ ಬಂದ ಇಂದಿಗೂ ಜೀವಂತವಾಗಿದೆ. ಪೆದ್ದೂರಿನಲ್ಲಿ ನಡೆಯುವ ಈ ಜನಪದ ಸಂಭ್ರಮ ದೇಶಾದ್ಯಂತ 58 ದೇಶಗಳಲ್ಲಿ ದೂರದರ್ಶನದ ಮೂಲಕ ನೇರ ಪ್ರಸಾರವಾಗುತ್ತದೆ. ಜಾನಪದ ಕಲೆಗಳನ್ನು ಉಳಿಸಿ ಬೆಳೆಸುವಲ್ಲಿ ಜನರು ಪ್ರೋತ್ಸಾಹಿಸಬೇಕೆಂದರು.

ಪ್ರಾಸ್ತಾವಿಕ ಭಾಷಣ ಮಾಡಿದ ಮಾಜಿ ಸಚಿವ ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ಮುಖ್ಯ ಆಯುಕ್ತರಾದ ಪಿ.ಜಿ.ಆರ್. ಸಿಂಧ್ಯಾ ಮಾತನಾಡಿ ಜನಪದ ವೈಶಿಷ್ಟ್ಯಗಳಾದ ತಮಟೆ ವಾದನ, ಡೊಳ್ಳುಕುಣಿತ, ಮಣಿಪುರಿ ನೃತ್ಯ, ತೊಗಲು ಗೊಂಬೆಯಾಟ ಮುಂತಾದ ಪ್ರಕಾರಗಳನ್ನು ಸಾರ್ವಜನಿಕರು ಈ ಜಾನಪದ ಕಲಾಮೇಳದಲ್ಲಿ ನೋಡಿ ಆನಂದಿಸಬಹುದು ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೇರಿದಂತೆ ಸಚಿವ ಸಂಪುಟದ ಸದಸ್ಯರು, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಜಿಲ್ಲೆಯ ಶಾಸಕರು, ಅಧಿಕಾರಿಗಳು ಈ ಜಾನಪದ ಸಂಭ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದರು.

ನಂತರ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್. ಆರ್. ವಿಶುಕುಮಾರ್ *ಮಾತನಾಡಿ, ಜಾನಪದ ಸಂಭ್ರಮ ಒಂದು ವಿಶಿಷ್ಟ ಕಾರ್ಯಕ್ರಮವಾಗಿರುವುದರಿಂದ ರಾಜ್ಯದ ವಿವಿದೆಡೆಯಿಂದ* ಕಲಾವಿದರು, ಸಾರ್ವಜನಿಕರು ಆಗಮಿಸಲಿದ್ದಾರೆ. ನಮ್ಮ ಇಲಾಖೆಯಿಂದ ಕರ್ನಾಟಕದ ಕಲೆ ಮತ್ತು ಸಂಸ್ಕೃತಿಯನ್ನು ಬಿಂಬಿಸುವ ಲೇಸರ್ ಪ್ರದರ್ಶನವನ್ನು ಸಹ ಈ ಸಂದರ್ಭದಲ್ಲಿ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದಲ್ಲಿ ಹೆಚ್ಚು ಜನರು ಭಾಗವಹಿಸಬೇಕೆಂದು ಅವರು ಕೋರಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕ ಕೆ.ಎ. ದಯಾನಂದ್ ಅವರು ಉಪಸ್ಥಿತರಿದ್ದರು.

ಕವನ:::ಜಿಪಿಆರ್

# ಕನ್ನಡ ಪುಸ್ತಕ ಸೊಗಸು-ಅರ್ಜಿ ಆಹ್ವಾನ

ಬೆಂಗಳೂರು ಜೂನ್ 22 (ಕರ್ನಾಟಕ ವಾರ್ತೆ)

ಕನ್ನಡ ಪುಸ್ತಕ ಪ್ರಾಧಿಕಾರದ ವತಿಯಿಂದ, ಜನವರಿ 2015 ರಿಂದ ಡಿಸೆಂಬರ್ 2015 ರ ಅವಧಿಯಲ್ಲಿ ಕನ್ನಡದಲ್ಲಿ ಪ್ರಕಟವಾದ ಕೃತಿಗಳಿಗೆ, ಅವುಗಳ ಮುದ್ರಣ, ಮುಖಪುಟ ವಿನ್ಯಾಸ, ಗುಣಮಟ್ಟವನ್ನು ಪರಿಗಣಿಸಿ,

ಕಲಾವಿದರು/ಲೇಖಕರು/ಪ್ರಕಾಶಕರಿಗೆ "ಕನ್ನಡ ಪುಸ್ತಕ ಸೊಗಸು-2015" ಬಹುಮಾನಗಳನ್ನು ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. (ಪ್ರಥಮ, ದ್ವಿತೀಯ, ತೃತೀಯ, ಮಕ್ಕಳ ಹಾಗೂ ಮುಖಪುಟ ಚಿತ್ರ ಕಲೆಯ ಪ್ರಥಮ, ಮುಖಪುಟ ಚಿತ್ರ ಕಲೆಯ ದ್ವಿತೀಯ ಬಹುಮಾನಗಳು) ಆಸಕ್ತ ಪ್ರಕಾಶಕರು/ಕಲಾವಿದರು/ಲೇಖಕರುಗಳು ಪುಸ್ತಕ ಹೆಸರು, ಲೇಖಕರ ಹೆಸರು, ಪ್ರಕಟವಾದ ವರ್ಷ, ಪ್ರಕಾಶಕರ ಹೆಸರು, ಮುಖಪುಟ ಚಿತ್ರ ರಚನೆಯ ಕಲಾವಿದರ ಹೆಸರು ಹಾಗೂ ಪ್ರಕಾಶಕರು/ಚಿತ್ರ ಕಲಾವಿದರ ಪೂರ್ಣ ವಿಳಾಸ- ಈ ಎಲ್ಲಾ ವಿವರಗಳೊಂದಿಗೆ ಪುಸ್ತಕದ ಎರಡು ಪ್ರತಿಗಳನ್ನು ದಿನಾಂಕ 30-06-2016 ರೊಳಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು-2 ಈ ವಿಳಾಸಕ್ಕೆ ಕಳುಹಿಸಿಕೊಡಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ: ಆಡಳಿತಾಧಿಕಾರಿ, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಮೊದಲನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು 560 002 ವೆಬ್‌ಸೈಟ್ ದೂರವಾಣಿ ಸಂಖ್ಯೆ 080-224884516 / 22107704 ಇಲ್ಲಿ ಸಂಪರ್ಕಿಸಬಹುದಾಗಿದೆ.
ಬಾಬು/ಕೆಎಂ